ಯಾವುದಾದರೂ ನೀತಿ-ನಿಯಮ ರೂಪಿಸಿದ್ದಾರೆಯೇ? ರೂಪಿಸಿದ್ದರೆ ಯಾವುವು? ರೂಪಿಸಿಲ್ಲದಿದ್ದರೆ, ಯಾವ ದಿನಾಂಕದೊಳಗೆ ರೂಪಿಸಲಾಗುವುದು?

ಶ್ರೀ ಎಂ. ರಾಜಶೇಖರ ಮೂರ್ತಿ (ಕಂದಾಯ ಸಚಿವರು): ಸದರಿ ವಿಷಯದ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು.

ಮಂಡ್ಯದ ಜಿಲ್ಲಾ ಆಸ್ಪತ್ರೆಯ ಹಾಸಿಗೆಗಳ ಸಂಖ್ಯೆಯಲ್ಲಿ ಹೆಚ್ಚಳ.

ಶ್ರೀ ಎಂ.ಎಸ್. ಆತ್ಮಾನಂದ (ಮಂಡ್ಯ): ಮಾನ್ಯ ಅಧ್ಯಕ್ಷಿಣಿಯವರೇ, ಮಂಡ್ಯ ದಲ್ಲಿರುವ ಜಿಲ್ಲಾ ಆಸ್ಪತ್ರೆಯ ಹಾಸಿಗೆಗಳ ಸಂಖ್ಯೆಯನ್ನು ಹೆಚ್ಚಿಗೆ ಮಾಡಬೇಕಾದುದು ತುಂಬಾ ಆವಶ್ಯಕವಾಗಿದೆ ಮತ್ತು ಅನಿವಾರ್ಯವಾಗಿದೆ. ಈ ದಿಸೆಯಲ್ಲಿ ಸಾರ್ವಜನಿಕರು ಹಾಗೂ ಚುನಾಯಿತ ಪ್ರತಿನಿಧಿಗಳು ಸರ್ಕಾರಕ್ಕೆ ಮನವಿಯನ್ನು ಸಹ ಮಾಡಿದ್ದಾರೆ. ಮಂಡ್ಯ ಜಿಲ್ಲಾ ಆಸ್ಪತ್ರೆಯ ಹಾಸಿಗೆಗಳ ಸಂಖ್ಯೆಯನ್ನು ಹೆಚ್ಚಿಗೆ ಮಾಡಬೇಕೆಂಬ ಕೋರಿಕೆಯ ಬಗ್ಗೆ ಸರ್ಕಾರದಲ್ಲಿ ಪ್ರಸ್ತಾವನೆ ಇದ್ದು, ಈ ಪ್ರಸ್ತಾವನೆಗೆ ಸರ್ಕಾರದ ಮಂಜೂರಾತಿ ದೊರಕಬೇಕಾಗಿದೆ. ಜಿಲ್ಲಾ ಆಸ್ಪತ್ರೆಯು ಅಭಿವೃದ್ಧಿ ಯಾಗದಿದ್ದರೆ ಜನ ಸಾಮಾನ್ಯರಿಗೆ ತೊಂದರೆಯಾಗುವುದು ಸಹಜ. ಆದ ಕಾರಣ, ಈ ವಿಷಯದಲ್ಲಿರುವ ಪ್ರಸ್ತಾವನೆಗೆ ಸರ್ಕಾರದ ಮಂಜೂರಾತಿ ನೀತಿ, ಸಂಬಂಧಪಟ್ಟ ಅಧಿಕಾರಿಗಳಿಗೆ ಶೀಘ್ರಕಾಮಗಾರಿ ಪ್ರಾರಂಭಿಸಲು ಆದೇಶ ನೀಡಬೇಕೆಂದು ಮಾನ್ಯ ಮುಖ್ಯ ಮಂತ್ರಿಗಳನ್ನು ಒತ್ತಾಯಪಡಿಸುತ್ತೇನೆ.

ಶ್ರೀ ಧರ್ಮಸಿಂಗ್ (ಸಮಾಜ ಕಲ್ಯಾಣ ಮಂತ್ರಿಗಳು): ಮಾನ್ಯ ಅಧ್ಯಕ್ಷರೆ, ಮಾನ್ಯ ಮುಖ್ಯಮಂತ್ರಿಗಳ ಪರವಾಗಿ ಈ ಹೇಳಿಕೆಯನ್ನು ನೀಡುತ್ತೇನೆ.

ಮಂಡ್ಯ ಜಿಲ್ಲೆಯ ಸಾರ್ವಜನಿಕ ಆಸ್ಪತ್ರೆಯಲ್ಲಿ ಈಗ ಹಾಲಿ 250 ಹಾಸಿಗೆಗಳು ಇದ್ದು ಇಲ್ಲಿ ಔಷಧ ವಿಭಾಗ, ಶಸ್ತ್ರ ಚಿಕಿತ್ಸಾ ವಿಭಾಗ, ಸ್ತ್ರೀರೋಗ ಚಿಕಿತ್ಸಾ ವಿಭಾಗ, ಮಕ್ಕಳ ವಿಭಾಗ, ಅಸ್ತಿ ಚಿಕಿತ್ಸಾ ವಿಭಾಗ, ಚರ್ಮರೋಗ ಚಿಕಿತ್ಸಾ ವಿಭಾಗ, ಕಿವಿ, ಮೂಗುಗಂಟಲು ವಿಭಾಗ, ದಂತ ಚಿಕಿತ್ಸಾ ವಿಭಾಗ, ಆರ್ಥ ಪೆಡಿಕ್ಸ್ ವಿಭಾಗ ಮತ್ತು ದಂತ ಚಿಕಿತ್ಸಾ ವಿಭಾಗ ಸೇವಾ ಸೌಲಭ್ಯಗಳು ಲಭ್ಯವಿರುತ್ತವೆ. ಮತ್ತೆ ಪ್ರತಿದಿನ 300 ಸೀಸೆಗಳ ಐ.ವಿ. ದ್ರಾವಣ ತಯಾರಿಸುವ ಘಟಕ, ಕ್ಷ-ಕಿರಣ, ವೀಡಿಯೋ ಎಂಡೋಸ್ಕೋಪ್ ವ್ಯವಸ್ಥೆ , ಪ್ರಯೋಗಶಾಲೆ ಮುಂತಾದ ಸೌಲಭ್ಯಗಳಿವೆ. ಮಂಡ್ಯ ಸಾರ್ವಜನಿಕ ಆಸ್ಪತ್ರೆಯ ಹಾಲಿ ಇರವ ಹಾಸಿಗೆಯ ಸಂಖ್ಯೆಯು ಇಲ್ಲಿಗೆ ಬರುವ ರೋಗಿಗಳ ಸೇವೆಗೆ ಸಾಲದಾಗಿರುವುದಿಲ್ಲ. ಎಂಬಅಂಶ ಸಾರ್ವಜನಿಕರಿಂದೇ ಮತ್ತು ಚುನಾಯಿತ ಪ್ರತಿನಿಧಿಗಳಿಂದ ಸರ್ಕಾರದ ಗಮನಕ್ಕೆ ಬಂದಿದ್ದು ಈ ವಿಷಯದ ಬಗ್ಗೆ ಪರಿಶೀಲಿಸಲು ಮಂಡ್ಯ ಜಿಲ್ಲಾ ಪರಿಷತ್ತಿನ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ಒಂದು ಸಮಿತಿಯನ್ನು ರಚಿಸಿ, ಆ ಸಮಿತಿಯ ವಿಷಯಗಳನ್ನು ಪರಿಶೀಲಿಸಿ ಈ ಆಸ್ಪತ್ರೆಯ ಹಾಸಿಗೆ ಸಂಖ್ಯೆಯನ್ನು ಹೆಚ್ಚಿಸಲು ಶಿಫಾರಸ್ಸು ಮಾಡಿರುತ್ತದೆ. ಹಣದ ಲಭ್ಯತೆಯನ್ನು ಆಧರಿಸಿ ಸದರಿ ಆಸ್ಪತ್ರೆಯ ಹಾಸಿಗೆಗಳ ಸಂಖ್ಯೆಯನ್ನು ಹೆಚ್ಚಿಸುವ ಪ್ರಸ್ತಾವನೆಯು ಸರ್ಕಾರದ ತೀವ್ರ ಪರಿಶೀಲನೆಯಲ್ಲಿದೆ.

8. ಗುಲ್ಬರ್ಗ ಬೀದರ್ ಹಾಗೂ ರಾಯಚೂರು ಜಿಲ್ಲೆಯಲ್ಲಿ 133 ಕಾರ್ಮಿಕರನ್ನು ಸಾರಿಗೆ ಸಂಸ್ಥೆಯಲ್ಲಿ ನೇಮಕ ಮಾಡುವಂತೆ ಒತ್ತಾಯ